# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಮೂರನೆಯ ಅಧಿವೇಶನ
## (ಮುಂದುವರೆದ ಉಪವೇಶನ)
## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ: 18ನೇ ಮಾರ್ಚ್, 2021**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನೈದನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

01) 05ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸುನೀಲ್ ವಲ್ಯಾಪುರೆ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 70 (399) : ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

02) 07ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕಾಂತರಾಜು (ಬಿಎಂಎಲ್)** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 94 (684)

03) 07ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೆ.ಟಿ. ಶ್ರೀಕಂಠೇಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 96 (672)

04) 07ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎಂ. ನಾರಾಯಣಸ್ವಾಮಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 101 (631)

05) 07ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 102 (689)

(02–05) : ಮಾನ್ಯ ಮುಖ್ಯಮಂತ್ರಿಗಳು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನೈದನೆಯ ಪಟ್ಟಿ

## 02. ವರದಿಯನ್ನೊಪ್ಪಿಸುವುದು

01. **ಶ್ರೀ ಎಂ.ಕೆ.ಪ್ರಾಣೇಶ್ (ಅಧ್ಯಕ್ಷರು, ಅರ್ಜಿಗಳ ಸಮಿತಿ)** ಅವರು ಕರ್ನಾಟಕ ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಯ 28ನೇ ವರದಿಯನ್ನು ಒಪ್ಪಿಸುವುದು.

## 03. ವಿತ್ತೀಯ ಕಾರ್ಯಕಲಾಪ

2021-22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ

(ನಾಲ್ಕನೇ ದಿನ)

## 04. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| **ಶ್ರೀಯುತರುಗಳಾದ:**<br>ಎನ್. ಅಪ್ಪಾಜಿಗೌಡ ಮತ್ತು<br>ಕೆ.ಎ. ತಿಪ್ಪೇಸ್ವಾಮಿ ಅವರುಗಳು | ನಾಗಮಂಗಲ ತಾಲ್ಲೂಕಿನ ವಿವಿಧ ಹೋಬಳಿಗಳಲ್ಲಿ ಕಾಲುವೆ ನಿರ್ಮಾಣಕ್ಕಾಗಿ ಭೂಸ್ವಾಧೀನ ಪಡಿಸಿಕೊಂಡು ರೈತರಿಗೆ ಭೂ ಪರಿಹಾರ ನೀಡದೆ ಇರುವ ಕುರಿತು |

## 05. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಎನ್. ರವಿಕುಮಾರ್** ಅವರು 2020-21ನೇ ಸಾಲಿನಲ್ಲಿ ರಾಜ್ಯದಲ್ಲಿ ಹೊಸದಾಗಿ 62 ನರ್ಸಿಂಗ್ ಮತ್ತು 40 ಅಲೈಡ್ ಹೆಲ್ತ್ ಸೈನ್ಸ್ ಕಾಲೇಜುಗಳನ್ನು ಪ್ರಾರಂಭಿಸಲು ಅವಶ್ಯವಿರುವ ಮೂಲಭೂತ ಸೌಕರ್ಯ ಹಾಗೂ ಬೋಧಕ ಸಿಬ್ಬಂದಿಗಳ ಕೊರತೆ ಇದ್ದರೂ ಕೂಡ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಅನುಮತಿ ನೀಡಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

ಆ) **ಶ್ರೀ ಎಂ.ನಾರಾಯಣಸ್ವಾಮಿ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರು,** ಬೆಂಗಳೂರು ಪೂರ್ವ ತಾಲ್ಲೂಕಿನ ಕೆ.ಆರ್. ಪುರಂ ವಾರ್ಡ್ ಸಂಖ್ಯೆ 53ನೇ ವ್ಯಾಪ್ತಿಯ ಬಸವನಪುರ ಗ್ರಾಮದ ಸರ್ವೆ ನಂ.26/01ರಲ್ಲಿ ನಾಲ್ಕು ಎಕರೆ ವಿಸ್ತೀರ್ಣದ ಜಮೀನಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ದಾವೆ ಇದ್ದರು ಅಲ್ಲಿನ ಜಿಲ್ಲಾಧಿಕಾರಿಗಳು ಕಾನೂನು ಬಾಹಿರವಾಗಿ ಭೂಪರಿವರ್ತನೆ ಆದೇಶ ಹೊರಡಿಸಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಇ) **ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು** ಅವರು ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿ ದೃಷ್ಟಿಯಿಂದ ಪ್ರಮುಖ ಇಲಾಖೆಗಳ ವಿಭಾಗೀಯ ಕಛೇರಿ ಹಾಗೂ ಪ್ರಾದೇಶಿಕ ಆಡಳಿತ ಕಛೇರಿಯನ್ನು ನಿರ್ಮಿಸಲು ಹಾಗೂ ಸುವರ್ಣ ವಿಧಾನ ಸೌಧವನ್ನು ಸದ್ಬಳಕೆ ಮಾಡಿಕೊಳ್ಳುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಈ) **ಶ್ರೀ ಹೆಚ್.ಎಂ.ರಮೇಶ್‌ಗೌಡ** ಅವರು ಬೆಂಗಳೂರು ಜಲಮಂಡಳಿಯವರು ನೀರಿನ ಸಂಪರ್ಕ ಮತ್ತು ಒಳಚರಂಡಿ ವ್ಯವಸ್ಥೆಯನ್ನು ಪಡೆದವರಿಗೆ ಹಾಗೂ ಪಡೆಯದವರಿಗೆ ನೋಟೀಸ್ ಜಾರಿ ಮಾಡಿರುವುದರಿಂದ ಸಾರ್ವಜನಿಕರು ಆತಂಕಕ್ಕೊಳಗಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಉ) **ಶ್ರೀಯುತರುಗಳಾದ ನಿರಾಣಿ ಹಣಮಂತ್ ರುದ್ರಪ್ಪ, ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಸರ್ಕಾರಿ ಮುಖ್ಯ ಸಚೇತಕರು, ಪ್ರದೀಪ್ ಶೆಟ್ಟರ್, ಬಿ.ಜಿ. ಪಾಟೀಲ್, ಎಸ್.ವಿ. ಸಂಕನೂರ** ಅವರುಗಳು ಉತ್ತರ ಕರ್ನಾಟಕ ಭಾಗದ ಜನರ ಹಾಗೂ ಜಾನುವಾರುಗಳ ಕುಡಿಯುವ ನೀರಿನ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸುವ ನಿಟ್ಟಿನಲ್ಲಿ ಸಮಗ್ರ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

..3

## 06. ನಿಯಮ 330ರ ಮೇರೆಗೆ

ಅ) **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಎನ್. ಅಪ್ಪಾಜಿಗೌಡ, ಕೆ.ಟಿ. ಶ್ರೀಕಂಠೇಗೌಡ, ಗೋವಿಂದರಾಜು** ಅವರುಗಳು ರಾಜ್ಯದಲ್ಲಿ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್-19 ಸಾಂಕ್ರಾಮಿಕ ರೋಗದ ಪರಿಣಾಮದಿಂದಾಗಿ ಲಾಕ್‌ಡೌನ್ ವಿಧಿಸಲಾಗಿ ಶಾಲಾ ಮಕ್ಕಳ ಕಲಿಕೆಯಲ್ಲಿ ತೀವ್ರ ಹಿನ್ನಡೆ ಉಂಟಾಗಿರುವುದರಿಂದ ವಿದ್ಯಾರ್ಥಿಗಳ ಕುಟುಂಬಗಳ ಸ್ಥಿತಿ, ಆರ್ಥಿಕ ಸಂಕಷ್ಟ ಹಾಗೂ ಜೀವನ ಶೈಲಿಗಳ ಕುರಿತಂತೆ ಸಮಗ್ರ ಸಮೀಕ್ಷೆ ನಡೆಸುವ ಕುರಿತು ಪ್ರಸ್ತಾಪಿಸುವುದು.

ಆ) **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ ಮತ್ತು ನಿರಾಣಿ ಹಣಮಂತ್ ರುದ್ರಪ್ಪ** ಅವರುಗಳು ಪದವಿ ಪೂರ್ವ ಶಿಕ್ಷಣ ಇಲಾಖೆಯ ದಿನಾಂಕ:27.09.2018ರಂದು ಹೊರಡಿಸಿರುವ ಆದೇಶ ಸಂಖ್ಯೆ ಇಡಿ/107/ಟಿಪಿಯು/2017 ರ ಪ್ರಕಾರ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ತೊಂದರೆಯಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

ಇ) **ಶ್ರೀ ಎಸ್.ಆರ್ ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು** ಅವರು ರಾಜ್ಯದಲ್ಲಿನ ಪೊಲೀಸ್ ಸಿಬ್ಬಂದಿಗಳ ವೇತನ ಪರಿಷ್ಕರಣೆಗೆ ಸಂಬಂಧಿಸಿದಂತೆ ಶ್ರೀ ರಾಘವೇಂದ್ರ ಔರದ್ಕರ್‌ರವರ ವರದಿಗೆ ವ್ಯತಿರಿಕ್ತವಾಗಿ ಆರ್ಥಿಕ ಇಲಾಖೆ ಹೊರಡಿಸಿರುವ ಮತ್ತೊಂದು ಆದೇಶದ ಪರಿಣಾಮವಾಗಿ ಅನೇಕ ವರ್ಷ ಸೇವೆ ಸಲ್ಲಿಸಿರುವ ಹಿರಿಯ ಸಿಬ್ಬಂದಿಗಳಿಗೆ ಹಾಗೂ ಹೊಸದಾಗಿ ಸೇವೆಗೆ ಸೇರಿರುವ ಸಿಬ್ಬಂದಿಗಳಿಗೆ ಸಮಾನ ವೇತನ ನಿಗದಿಯಾಗಿರುವುದರಿಂದ ತಾರತಮ್ಯವಾಗಿರುವ ವಿಷಯದ ಬಗ್ಗೆ ಪ್ರಸ್ತಾಪಿಸುವುದು.

## 07. ಅರ್ಧ ಗಂಟೆ ಕಾಲಾವಧಿ ಚರ್ಚೆ

ಮಣ್ಣಿನ ಫಲವತ್ತತೆಗೆ ಸಂಬಂಧಿಸಿದಂತೆ ಪ್ರತಿ ಜಿಲ್ಲೆಯಲ್ಲೂ ಮಣ್ಣಿನ ಪರೀಕ್ಷಾ ಪ್ರಯೋಗಾಲಯ ಹಾಗೂ ಸಂಚಾರಿ ಮಣ್ಣಿನ ಪರೀಕ್ಷಾ ಪ್ರಯೋಗಾಲಯವನ್ನು ಸ್ಥಾಪಿಸಿ, ಮಣ್ಣಿನ ಆರೋಗ್ಯ ಕಾರ್ಡ್ ವಿತರಣೆ ಮಾಡುವ ಯೋಜನೆಯ ಬಗ್ಗೆ ದಿನಾಂಕ:03.02.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:306ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕೆ.ಎ.ತಿಪ್ಪೇಸ್ವಾಮಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**